# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಧು ಜಿ. ಮಾದೇಗೌಡ<br>(ಪದವೀಧರರ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 611 (781) |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |
| ಉತ್ತರಿಸುವ ದಿನಾಂಕ | : | 12-12-2025 |

| ಕ್ರ. ಸಂ. | ಪ್ರಶ್ನೆ | ವಿಶ್ವವಿದ್ಯಾಲಯ | ಉತ್ತರ |
|---|---|---|---|
| ಅ | ಸರ್ಕಾರದಿಂದ ಸ್ಥಾಪಿಸಲ್ಪಟ್ಟು ಕೃಷಿ ಇಲಾಖೆಯ ವ್ಯಾಪ್ತಿಯಲ್ಲಿರುವ ಕೃಷಿ ವಿಜ್ಞಾನ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; ಯಾವುವು; ಈ ವಿ.ವಿ.ಗಳ ವ್ಯಾಪ್ತಿಯಲ್ಲಿರುವ ಸರ್ಕಾರಿ ಮತ್ತು ಖಾಸಗಿ ಕೃಷಿ ಕಾಲೇಜುಗಳ; ವಿವರ ನೀಡುವುದು. | | ಸರ್ಕಾರದಿಂದ ಸ್ಥಾಪಿಸಲ್ಪಟ್ಟುಕೃಷಿ ಇಲಾಖೆಯ ವ್ಯಾಪ್ತಿಯಲ್ಲಿಒಟ್ಟು 05 ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯಗಳು ಇದ್ದು, ವಿವರ ಈ ಕೆಳಕಂಡಂತಿದೆ:<br>1. ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.<br>2. ಕೃಷಿ ವಿಶ್ವವಿದ್ಯಾಲಯ, ಧಾರವಾಡ.<br>3. ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞನಗಳ ವಿಶ್ವವಿದ್ಯಾಲಯ, ಶಿವಮೊಗ್ಗ.<br>4. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರು.<br>5. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ. |
| | | ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು | ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಕಾಲೇಜುಗಳ ವಿವರ ಈ ಕೆಳಕಂಡಂತಿರುತ್ತದೆ:<br>1. ಕೃಷಿ ಮಹಾವಿದ್ಯಾಲಯ, ಜಿ.ಕೆ.ವಿ.ಕೆ, ಬೆಂಗಳೂರು<br>2. ಕೃಷಿ ಇಂಜಿನಿಯರಿಂಗ್ ಮಹಾವಿದ್ಯಾಲಯ, ಜಿ.ಕೆ.ವಿ.ಕೆ, ಬೆಂಗಳೂರು<br>3. ರೇಷ್ಮೆ ಕೃಷಿ ಮಹಾವಿದ್ಯಾಲಯ, ಚಿಂತಾಮಣಿ<br><br>ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಕಾಲೇಜುಗಳ ವಿವರ ಈ ಕೆಳಕಂಡಂತಿರುತ್ತದೆ:<br>1. ಆದಿಚುಂಚನಗಿರಿ ಕೃಷಿ ವಿಜ್ಞಾನಗಳ ಕಾಲೇಜು, ಮಾಯಸಂದ್ರ, ತುರುವೇಕೆರೆ ತಾಲ್ಲೂಕು, ತುಮಕೂರು.<br>2. ಶ್ರಿ ಕೆ. ಕರಿಯಪ್ಪ ಕೃಷಿ ಕಾಲೇಜು, ಕನಕಪುರ ತಾಲ್ಲೂಕು, ರಾಮನಗರ. |
| | | ಕೃಷಿ ವಿಶ್ವವಿದ್ಯಾಲಯ, ರಾಯಚೂರು | ರಾಯಚೂರು ಕೃಷಿ ವಿಶ್ವವಿದ್ಯಾನಿಲಯದ ಅಧೀನದಲ್ಲಿ ಕಾರ್ಯನಿರ್ವಹಿಸತ್ತಿರುವ ಸರ್ಕಾರಿ ಕಾಲೇಜುಗಳ ವಿವರ ಈ ಕೆಳಕಂಡಂತಿರುತ್ತದೆ:<br>1. ಕೃಷಿ ಮಹಾವಿದ್ಯಾಲಯ, ರಾಯಚೂರು<br>2. ಕೃಷಿ ತಾಂತ್ರಿಕ ಮಹಾವಿದ್ಯಾಲಯ, ರಾಯಚೂರು<br>3. ಕೃಷಿ ಮಹಾವಿದ್ಯಾಲಯ, ಕಲಬುರಗಿ<br>4. ಕೃಷಿ ಮಹಾವಿದ್ಯಾಲಯ, ಭೀಮರಾಯನಗುಡಿ<br>5. ಕೃಷಿ ಮಹಾವಿದ್ಯಾಲಯ, ಹಗರಿ<br>6. ಕೃಷಿ ಮಹಾವಿದ್ಯಾಲಯ, ಗಂಗಾವತಿ<br>ರಾಯಚೂರು ಕೃ.ವಿ.ವಿ., ವ್ಯಾಪ್ತಿಯಲ್ಲಿ ಯಾವುದೇ ಖಾಸಗಿ ಮಹಾವಿದ್ಯಾಲಯಗಳು ಸ್ಥಾಪನೆಯಾಗಿರುವುದಿಲ್ಲ. |

<table>
<tr>
<td></td>
<td></td>
<td>ಕೃಷಿ ವಿಶ್ವವಿದ್ಯಾಲಯ, ಧಾರವಾಡ</td>
<td>ಧಾರವಾಡ ಕೃಷಿ ವಿಶ್ವವಿದ್ಯಾಲಯವು ಕೃಷಿ ಇಲಾಖೆಯ ವ್ಯಾಪ್ತಿಯಲ್ಲಿದೆ. ಕೃಷಿ ವಿಶ್ವವಿದ್ಯಾಲಯ, ಧಾರವಾಡದ ವ್ಯಾಪ್ತಿಯಡಿ ಈ ಕೆಳಗಿನ ಮಹಾವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ.<br>1. ಕೃಷಿ ಮಹಾವಿದ್ಯಾಲಯ, ಧಾರವಾಡ<br>2. ಕೃಷಿ ಮಹಾವಿದ್ಯಾಲಯ, ವಿಜಯಪುರ<br>3. ಕೃಷಿ ಮಹಾವಿದ್ಯಾಲಯ, ಹನುಮನಮಟ್ಟಿ<br>4. ಅರಣ್ಯ ಮಹಾವಿದ್ಯಾಲಯ, ಶಿರಸಿ<br>5. ಸಮುದಾಯ ವಿಜ್ಞಾನ ಮಹಾವಿದ್ಯಾಲಯ, ಧಾರವಾಡ<br><br>ಖಾಸಗಿ ಕೃಷಿ ಕಾಲೇಜುಗಳ ವಿವರಗಳು ಈ ಕೆಳಕಂಡಂತಿದೆ: (ಸಂಯೋಜಿತ ಮಹಾವಿದ್ಯಾಲಯ)<br>1. ಕೆ.ಎಲ್.ಇ. ಕೃಷಿ ವಿಜ್ಞಾನ ಮಹಾವಿದ್ಯಾಲಯ, ತೆನಿಕೊಳ್ಳ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ.</td>
</tr>
<tr>
<td></td>
<td></td>
<td>ಕೆ.ಶಿ.ನಾ.ಕೃ.ತೋ.ವಿ.ವಿ, ಶಿವಮೊಗ್ಗ</td>
<td>ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ವ್ಯಾಪ್ತಿಯಲ್ಲಿ 03 ಸರ್ಕಾರಿ ಕಾಲೇಜುಗಳು, 01 ಕೃಷಿ ಡಿಪ್ಲೋಮಾ ಕಾಲೇಜು ಹಾಗೂ 02 ಖಾಸಗಿ ಕೃಷಿ ಕಾಲೇಜುಗಳಿಗೆ ಸಂಯೋಜನೆಯನ್ನು (Affiliation) ನೀಡಿರುತ್ತದೆ. ಅವುಗಳ ವಿವರಗಳು ಈ ಕೆಳಕಂಡಂತಿದೆ.
<table>
<tr><th>ಕ್ರ.</th><th>ಸರ್ಕಾರಿ ಕಾಲೇಜುಗಳು</th><th>ಕ್ರ.</th><th>ಖಾಸಗಿ ಕಾಲೇಜುಗಳಿಗೆ ಸಂಯೋಜನೆ (Affiliation)</th></tr>
<tr><td>1.</td><td>ಕೃಷಿ ಮಹಾವಿದ್ಯಾಲಯ, ನವಿಲೆ ಆವರಣ, ಶಿವಮೊಗ್ಗ</td><td>1.</td><td>S.S. Institute of Agricultural and Horticultural Sciences, Davanagere</td></tr>
<tr><td>2.</td><td>ತೋಟಗಾರಿಕೆ ಮಹಾವಿದ್ಯಾಲಯ, ಮೂಡಿಗೆರೆ</td><td rowspan="3">2.</td><td rowspan="3">Alva's Institute of Agriculture Science & Technology, Moodbidri</td></tr>
<tr><td>3.</td><td>ತೋಟಗಾರಿಕೆ ಮಹಾವಿದ್ಯಾಲಯ, ಹಿರಿಯೂರು</td></tr>
<tr><td>4</td><td>ಕೃಷಿ ಡಿಪ್ಲೋಮಾ ಕಾಲೇಜು, ಬ್ರಹ್ಮಾವರ</td></tr>
</table></td>
</tr>
<tr>
<td rowspan="3">ಆ</td>
<td rowspan="3">ರಾಜ್ಯದಲ್ಲಿ ಖಾಸಗಿ ಕೃಷಿ ಕಾಲೇಜುಗಳಿವೆಯೇ; ಇದ್ದಲ್ಲಿ, ಯಾವುವು; ಯಾವ ವಿಶ್ವವಿದ್ಯಾಲಯದೊಂದಿಗೆ ಸಂಯೋಜಿತಗೊಂಡಿವೆ; ಹೊಸದಾಗಿ ಖಾಸಗಿ ಕೃಷಿ ಕಾಲೇಜುಗಳನ್ನು ಆರಂಭಿಸುವ ಪ್ರಸ್ತಾವನೆ ಸರ್ಕಾರಕ್ಕೆ ಸ್ವೀಕೃತವಾಗಿದೆಯೇ; (ಸಂಪೂರ್ಣ ವಿವರ ನೀಡುವುದು)</td>
<td>ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು</td>
<td>ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಅಧೀನದಲ್ಲಿ ಒಟ್ಟು ಎರಡು ಸಂಯೋಜಿತ ಖಾಸಗಿ ಕೃಷಿ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ:<br>ಅ) ಆದಿಚುಂಚನಗಿರಿ ಕೃಷಿ ವಿಜ್ಞಾನಗಳ ಕಾಲೇಜು, ತುಮಕೂರು<br>ಆ) ಶ್ರೀ ಕೆ. ಕರಿಯಪ್ಪ ಕೃಷಿ ಕಾಲೇಜು, ಕನಕಪುರ– ಸಂಯೋಜನೆಗೊಂಡಿರುತ್ತವೆ.<br><br>ಪ್ರಸ್ತುತ ಹೊಸದಾಗಿ ಕೃಷಿ ಕಾಲೇಜುಗಳನ್ನು ಆರಂಭಿಸುವ ಪ್ರಸ್ತಾವನೆಗಳು ಸರ್ಕಾರದ ಹಂತದಲ್ಲಿ ಸ್ವೀಕೃತಿಯಾಗಿರುವುದಿಲ್ಲ.</td>
</tr>
<tr>
<td>ಕೃಷಿ ವಿಶ್ವವಿದ್ಯಾಲಯ, ರಾಯಚೂರು</td>
<td>ರಾಯಚೂರು ಕೃ.ವಿ.ವಿ. ವ್ಯಾಪ್ತಿಯಲ್ಲಿ ಹೊಸದಾಗಿ ಕೃಷಿ ಕಾಲೇಜುಗಳನ್ನು ಆರಂಭಿಸಲು ನವೋದಯಾ ಶಿಕ್ಷಣ ಸಂಸ್ಥೆ, ಮತ್ತು ಬಾಲ್ಕಿ ಮಠ, ಬೀದರ್ ನಿಂದ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸ್ವೀಕೃತಗೊಂಡಿರುತ್ತದೆ.</td>
</tr>
<tr>
<td>ಕೃಷಿ ವಿಶ್ವವಿದ್ಯಾಲಯ, ಧಾರವಾಡ</td>
<td>ಕೆ.ಎಲ್ .ಇ ಸಂಸ್ಥೆಯ ಅಡಿಯಲ್ಲಿ ಬೆಳಗಾವಿ ಜಿಲ್ಲೆಯ ಮುರುಗೋಡ ಹೋಬಳಿ, ಸವದತ್ತಿ ತಾಲ್ಲೂಕು ತೆನಿಕೊಳ್ಳ ಗ್ರಾಮದಲ್ಲಿ 2025-26ನೇ ಶೈಕ್ಷಣಿಕ ವರ್ಷದಿಂದ ಕೃಷಿ ವಿಶ್ವವಿದ್ಯಾಲಯ, ಧಾರವಾಡದಿಂದ ಸಂಯೋಜನೆಗೊಂಡು ಹೊಸದಾಗಿ ಖಾಸಗಿ ಕೃಷಿ ಮಹಾವಿದ್ಯಾಲಯವು ಪ್ರಾರಂಭವಾಗಿದೆ.<br><br>ಪ್ರಸ್ತುತ ಕೃಷಿ ವಿಶ್ವವಿದ್ಯಾಲಯ, ಧಾರವಾಡ ವ್ಯಾಪ್ತಿಯಲ್ಲಿ ಹೊಸದಾಗಿ ಕೃಷಿ ಕಾಲೇಜನ್ನು ಆರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.</td>
</tr>
</table>

| | | | |
|---|---|---|---|
| | | ಕೆ.ಶಿ.ನಾ.ಕೃ.ತೋ.ವಿ.ವಿ, ಶಿವಮೊಗ್ಗ | ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ಅಡಿಯಲ್ಲಿ 2025-26ನೇ ಸಾಲಿನಿಂದ 02 ಖಾಸಗಿ ಕೃಷಿ ಕಾಲೇಜುಗಳು ಸಂಯೋಜನೆಗೊಂಡಿದ್ದು, ವಿವರಗಳು ಈ ಕೆಳಕಂಡಂತಿದೆ:<br>1. S.S. Institute of Agricultural and Horticultural Sciences, Davanagere.<br>2. Alva's Institute of Agriculture Science & Technology, Moodbidri<br><br>ಪ್ರಸ್ತುತ ಕೃಷಿ ವಿಶ್ವವಿದ್ಯಾಲಯ, ಶಿವಮೊಗ್ಗ ವ್ಯಾಪ್ತಿಯಲ್ಲಿ ಹೊಸದಾಗಿ ಕೃಷಿ ಕಾಲೇಜನ್ನು ಆರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ | ಕೃಷಿ ಕಾಲೇಜುಗಳ ಸ್ಥಾಪನೆ ಹೊಣೆಯನ್ನು ಖಾಸಗಿಯವರಿಗೆ ವಹಿಸಬಾರದು, ಕೃಷಿ ಖಾಸಗೀಕರಣ ಆಗಬಾರದು ಎನ್ನುವ ಸಾರ್ವಜನಿಕ ಒತ್ತಾಯದ ಕುರಿತು ಸರ್ಕಾರದ ನಿಲುವೇನು. | | ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ 10/2010 ರಲ್ಲಿ ಖಾಸಗಿಯವರಿಗೆ ಕೃಷಿ ಮಹಾವಿದ್ಯಾಲಯವನ್ನು ಸ್ಥಾಪಿಸಲು ಅವಕಾಶವಿದ್ದು, ಗುಣಮಟ್ಟದ ಶಿಕ್ಷಣಕ್ಕೆ ನಿಯಮಾವಳಿಗಳನ್ನು ರಚಿಸಲಾಗಿದ್ದು, ನಿಯಮಾವಳಿಗಳನ್ವಯ ಅರ್ಹತೆ ಪಡೆದ ಸಂಸ್ಥೆಗಳಿಂದ ಖಾಸಗಿ ಕೃಷಿ ಮಹಾವಿದ್ಯಾಲಯ ಸ್ಥಾಪಿಸಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ದಿನಾಂಕ: 05.03.2024ರಂದು ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಮನ್ವಯ ಸಮಿತಿಯ ಸಭೆಯಲ್ಲಿ ಕೃಷಿ ಇಲಾಖೆಯ ವ್ಯಾಪ್ತಿಗೊಳಪಡುವ ಕೃಷಿ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಖಾಸಗಿ ಕೃಷಿ ಕಾಲೇಜುಗಳನ್ನು ಸ್ಥಾಪಿಸಲು ತೀರ್ಮಾನಿಸಲಾಗಿರುತ್ತದೆ. |
| ಈ | ರಾಜ್ಯದಲ್ಲಿ ಸಮಗ್ರ ಕೃಷಿ ವಿಶ್ವವಿದ್ಯಾಲಯ ಸ್ಥಾಪನೆ ಸಂಬಂಧ ಶ್ರೀ. ಟಿ. ಎಂ. ವಿಜಯಭಾಸ್ಕರ್ ನೇತೃತ್ವದ ತಜ್ಞರ ಸಮಿತಿ ಸಲ್ಲಿಸಿದ ವರದಿಯನ್ನಾಧಿರಿಸಿ ಸರ್ಕಾರ ಈವರೆವಿಗೂ ಕೈಗೊಂಡಿರುವ ಕ್ರಮಗಳೇನು; ಎಷ್ಟು ಹಂತದಲ್ಲಿ ಸಮಿತಿಯ ಶಿಫಾರಸ್ಸುಗಳನ್ನು ಜಾರಿಗೊಳಿಸಲು ಸರ್ಕಾರ ಉದ್ದೇಶಿಸಿದೆ; (ಸಂಪೂರ್ಣ ವಿವರ ನೀಡುವುದು) | | ರಾಜ್ಯದಲ್ಲಿ ಸಮಗ್ರ ಕೃಷಿ ವಿಶ್ವವಿದ್ಯಾಲಯ ಸ್ಥಾಪನೆ ಸಂಬಂಧ ಶ್ರೀ. ಟಿ. ಎಂ. ವಿಜಯಭಾಸ್ಕರ್, ನಿವೃತ್ತ ಮುಖ್ಯಕಾರ್ಯದರ್ಶಿಗಳು, ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯು ರಾಜ್ಯಾದಂತ ಸಂಚರಿಸಿ, ವಿಶ್ವವಿದ್ಯಾಲಯಗಳ ಬಗ್ಗೆ ಸಮಗ್ರವಾಗಿ ವಿಶ್ಲೇಷಿಸಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿ ಶಿಫಾರಸ್ಸುಗಳನ್ನು ಮಡಿರುತ್ತಾರೆ. ಪ್ರಸ್ತುತ ವರದಿಯಲ್ಲಿನ ಶಿಫಾರಸ್ಸುಗಳನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ. |
| ಉ | ವಿವಿಧ ಕೃಷಿ ವಿವಿಗಳಲ್ಲಿ ಖಾಲಿ ಇರುವ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ; ಹಾಗೂ, ಬೋಧಕ ಹುದ್ದೆಗಳನ್ನು ಭರ್ತಿ | ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು | ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ ಗ್ರೂಪ್-ಎ 15 ಬೋಧಕ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ದಿ: 24.03.2023 ರಂದು ಹೊರಡಿಸಿದ್ದ ಅಧಿಸೂಚನೆಗೆ ಸಂಬಂಧಿಸಿದಂತೆ, ನೇಮಕಾತಿ ಪ್ರಕ್ರಿಯೆಯು ಪೂರ್ಣಗೊಂಡಿದ್ದು, ಭರ್ತಿಯಾಗುವ ಹುದ್ದೆಗಳಿಗೆ ಆಯವ್ಯಯದಲ್ಲಿ ಸೂಕ್ತ ಅನುದಾನವನ್ನು ಕಲ್ಪಿಸಿಕೊಡುವ ಪ್ರಸ್ತಾವನೆಯು ಹಾಗೂ ಎ.ಐ.ಸಿ.ಆರ್.ಪಿ (AICRP) ಪ್ರಾಯೋಜಕತ್ವದ ಸಂಶೋಧನಾ ಯೋಜನೆಗಳಲ್ಲಿ ಖಾಲಿ ಇರುವ 11 ಹಾಗೂ ಭಾರತ ಸರ್ಕಾರದ ಅನುದಾನಿತ ಕೃಷಿ ವಿಜ್ಞಾನ ಕೇಂದ್ರಗಳಲ್ಲಿ |

| | | | |
|---|---|---|---|
| | ಮಾಡಿಕೊಳ್ಳುವ ಸಂಬಂಧ ಎಷ್ಟು ಪ್ರಸ್ತಾವನೆಗಳು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ? (ವಿವರ ನೀಡುವುದು) | | ಖಾಲಿ ಇರುವ 24 ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಗಳು ಸರ್ಕಾರದಲ್ಲಿ ಸ್ವೀಕೃತಿಗೊಂಡಿದ್ದು, ಪ್ರಸ್ತುತ ಆರ್ಥಿಕ ಇಲಾಖೆಯ ಪರಿಶೀಲನೆಯ ಅನುಮೋದನೆಗಾಗಿ ಮಂಡಿಸಲಾಗಿರುತ್ತದೆ. |
| | | ಕೃಷಿ ವಿಶ್ವವಿದ್ಯಾಲಯ, ರಾಯಚೂರು | 90 ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ಕೋರಿ ಪ್ರಸ್ತಾವನೆಗಳು ಸರ್ಕಾರದಲ್ಲಿ ಸ್ವೀಕೃತಿಗೊಂಡಿದ್ದು, ಪ್ರಸ್ತುತ ಆರ್ಥಿಕ ಇಲಾಖೆಯ ಅನುಮೋದನೆಗಾಗಿ ಮಂಡಿಸಲಾಗಿರುತ್ತದೆ. |
| | | ಕೃಷಿ ವಿಶ್ವವಿದ್ಯಾಲಯ, ಧಾರವಾಡ | ಧಾರವಾಡ ಕೃವಿವಿಯಲ್ಲಿ ಖಾಲಿ ಇರುವ ಒಟ್ಟು ಹುದ್ದೆಗಳ ಪೈಕಿ ಶೇ. 50 ರಷ್ಟು ಹುದ್ದೆಗಳನ್ನು ಅಂದರೆ 100 ಬೋಧಕ ಮತ್ತು 87 ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿಗಾಗಿ ಸಲ್ಲಿಸಲಾದ ಪ್ರಸ್ತಾವನೆ ಹಾಗೂ ಅನುಚ್ಛೇದ 371(ಜೆ) ರನ್ವಯ ರಾಜ್ಯ ಮಟ್ಟದ ಸ್ಥಳೀಯ ವೃಂದದಲ್ಲಿ ಖಾಲಿ ಇರುವ 30 ಬೋಧಕ ಮತ್ತು 28 ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡುವ ಪ್ರಸ್ತಾವನೆಗಳನ್ನು ಪ್ರಸ್ತುತ ಆರ್ಥಿಕ ಇಲಾಖೆಯ ಅನುಮೋದನೆಗಾಗಿ ಮಂಡಿಸಲಾಗಿರುತ್ತದೆ. |
| | | ಕೆ.ಶಿ.ನಾ.ಕೃ.ತೋ.ವಿ.ವಿ, ಶಿವಮೊಗ್ಗ | ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ಇಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದದ – 188 ಮತ್ತು ಕಲ್ಯಾಣ ಕರ್ನಾಟಕ ಭಾಗದ 28 ಒಟ್ಟು 216 ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಪ್ರಸ್ತಾವನೆ ಹಾಗೂ ಶೇ.100% ಹಾಗೂ ಶೇ.75% ರಷ್ಟು ಅನುದಾನಿತ ICAR – KVK ಮತ್ತು ಇತರೆ ಯೋಜನೆಗಳಡಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಹೊರಗುತ್ತಿಗೆ ಬದಲು ನೇರ ನೇಮಕಾತಿಯ ಮುಖಾಂತರ 12 ಬೋಧಕೇತರ ಹುದ್ದೆಗಳ ಜೊತೆಗೆ ಪ್ರಸ್ತುತ ಕೃಷಿ ವಿಜ್ಞಾನ ಕೇಂದ್ರದಲ್ಲಿ ಖಾಲಿ ಇರುವ ಟ್ರ್ಯಾಕ್ಟರ್ ಚಾಲಕ -2 ಹುದ್ದೆ ಮತ್ತು AINP ಮತ್ತು AICRP ಯೋಜನೆಗಳಡಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರು-1, ತಾಂತ್ರಿಕ ಸಹಾಯಕರು-1, ಸಂಶೋಧನ ಸಹಾಯಕರು (T-4)-03 ಮತ್ತು ಕ್ಷೇತ್ರ ಸಹಾಯಕರು–2 ಹುದ್ದೆಗಳು ಒಟ್ಟು 21 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡುವ ಪ್ರಸ್ತಾವನೆಗಳು ಪ್ರಸ್ತುತ ಆರ್ಥಿಕ ಇಲಾಖೆಯ ಅನುಮೋದನೆಗಾಗಿ ಮಂಡಿಸಲಾಗಿರುತ್ತದೆ. |

ಇ-ಸಂಖ್ಯೆ: AGRI/101/AUM/2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು